ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/09/ಇಸಿಎಸ್2/2017

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ: 02.02.2018.

**ಸುತ್ತೋಲೆ**

ವಿಷಯ : 2009-10 ನೇ ಸಾಲಿನಲ್ಲಿ ಸಿ-09 ಪಠ್ಯಕ್ರಮದಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಡಿಪ್ಲೊಮಾ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶದ ಬಗ್ಗೆ ಮಾಹಿತಿ ಕುರಿತು.

ಉಲ್ಲೇಖ : 1. ಸರ್ಕಾರದ ಆದೇಶ ಸಂಖ್ಯೆ: ಇಡಿ/178/ಟಿಪಿಇ/2009, ದಿನಾಂಕ: 01.08.2009.
2. ಈ ಕಛೇರಿ ಪತ್ರ ಸಂಖ್ಯೆ: ಬಿಟಿಇ/09/ಇಸಿಎಸ್2/2017, ದಿನಾಂಕ: 28.08.2017.

*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2009-10 ನೇ ಸಾಲಿನಲ್ಲಿ ಸಿ-09 ಪಠ್ಯಕ್ರಮದಲ್ಲಿ ಡಿಪ್ಲೊಮಾ ಕೋರ್ಸ್‌ಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಕಾಲಮಿತಿ ನಿಗಧಿಪಡಿಸಿರುವ ಬಗ್ಗೆ ಉಲ್ಲೇಖ(1) ರ ಸರ್ಕಾರಿ ಆದೇಶದ ಕಂಡಿಕೆ (11) ರಲ್ಲಿ ಈ ಕೆಳಕಂಡಂತೆ ತಿಳಿಸಲಾಗಿದೆ

11. MAXIMUM PERIOD FOR COMPLETION OF DIPLOMA COURSES

"Maximum period for completion of the course shall be thrice the duration of the course from the date of First admission (includes the period of detention and discontinuation of studies by student etc) failing which they will have to forfeit the claim for qualifying for the award of Diploma (They will not be permitted to appear for examinations after that date). This rule applies for all Diploma courses of 3 or 3-1/2 years of Engineering and Non-Engineering courses".

ಆದ್ದರಿಂದ 2009-10 ನೇ ಸಾಲಿನಲ್ಲಿ ಡಿಪ್ಲೊಮಾ ಪ್ರವೇಶಾತಿ ಪಡೆದು ಬಾಕಿ ವಿಷಯಗಳನ್ನು ಉಳಿಸಿಕೊಂಡಿರುವ ವಿದ್ಯಾರ್ಥಿಗಳಿಗೆ ಉಲ್ಲೇಖದ ಸರ್ಕಾರಿ ಆದೇಶದನ್ವಯ ಕ್ರಮಜರುಗಿಸಬೇಕಾಗಿದ್ದು, ***2018 ರ ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಯೇ ಕೊನೆಯ ಅವಕಾಶವಾಗಿರುತ್ತದೆ***. ನಂತರ ಡಿಪ್ಲೊಮಾ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲವೆಂದು ಉಲ್ಲೇಖ (2) ರ ಈ ಕಛೇರಿ ಸುತ್ತೋಲೆಯಲ್ಲಿ ಈಗಾಗಲೇ ತಿಳಿಸಲಾಗಿದೆ. ಪ್ರಯುಕ್ತ ಸಂಸ್ಥೆಗಳ ಪ್ರಾಚಾರ್ಯರುಗಳು ಈ ಬಗ್ಗೆ ಸೂಚನಾ ಫಲಕಗಳಲ್ಲಿ ಹಾಗೂ ಸ್ಥಳೀಯ ವೃತ್ತ ಪತ್ರಿಕೆಗಳಲ್ಲಿ ಪ್ರಕಟಿಸಿ ವಿದ್ಯಾರ್ಥಿಗಳ ಗಮನಕ್ಕೆ ತರಲು ಮತ್ತೊಮ್ಮೆ ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳ

ಇವರಿಗೆ : ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮಾಹಿತಿಗಾಗಿ.

ಪ್ರತಿ: 1. ಗಣಕಯಂತ್ರ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ – ಮಾಹಿತಿಗಾಗಿ ಮತ್ತು ತಂತ್ರಾಶದಲ್ಲಿ ಅಗತ್ಯ ಮಾರ್ಪಾಡಿಗಾಗಿ ಕ್ರಮಕೈಗೊಳ್ಳಲು.
2. ಇ-ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
4. ನಿರ್ದೇಶಕರ ಆಪ್ತಶಾಖೆ.
5. ಕಾರ್ಯದರ್ಶಿಯವರ ಆಪ್ತಶಾಖೆ.